ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 12/12/20

# ಗೋಹತ್ಯೆ ನಿಷೇಧಕ್ಕೆ ಸುಗ್ರೀವಾಜ್ಞೆ: ಸಿಎಂ

## ಮಸೂದೆಗೆ ಅಡ್ಡಿ ಹಿನ್ನೆಲೆಯಲ್ಲಿ ಸುಗ್ರೀವಾಜ್ಞೆ ಕಲಾಪ ಮುಂದಕ್ಕೆ: ಸಭಾಪತಿ ವಿರುದ್ಧ ಗರಂ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಪರಿಷತ್ತಿನಲ್ಲಿ ವಿಧೇಯಕ ಅಂಗೀಕಾರಕ್ಕೆ ಅಡ್ಡಿ ಉಂಟಾದ ಕಾರಣಕ್ಕೆ ಸುಗ್ರೀವಾಜ್ಞೆ ಮೂಲಕಗೋಹತ್ಯೆ ನಿಷೇಧಕಾಯ್ದೆ ಜಾರಿಗೊಳಿಸಲು ನಿರ್ಧರಿಸಲಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದ್ದಾರೆ.

ಶುಕ್ರವಾರ ತಮ್ಮ ನಿವಾಸದಲ್ಲಿ ಗೋಪೂಜೆ ಸಲ್ಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಧಾನಪರಿಷತ್ತಿನ ಕಲಾಪ ಸಲಹಾ ಸಮಿತಿಯಲ್ಲಿ ಡಿ.15ರವರೆಗೆ ಸದನದ ಕಲಾಪ ನಡೆಸುವಂತೆ ತೀರ್ಮಾನಿಸಲಾಗಿತ್ತು. ಆ ಸಭೆಯಲ್ಲಿ ಸಭಾಪತಿಗಳು ಸಹ ಇದ್ದರು. ಆದರೆ ಈಗ ಏಕಾಏಕಿ ಸದನವನ್ನು ಸಭಾಪತಿಗಳು ಮುಂದೂಡಿಕೆ ಮಾಡಿದ್ದು ಸರಿಯಲ್ಲ, ↘ 9



ಗೋಹತ್ಯೆ ನಿಷೇಧ ಮಸೂದೆ ವಿಧಾನಸಭೆಯಲ್ಲಿ ಅಂಗೀಕಾರಗೊಂಡ ಹಿನ್ನೆಲೆಯಲ್ಲಿ ಬೆಂಗಳೂರಿನ ತಮ್ಮ ಅಧಿಕೃತ ನಿವಾಸ 'ಕಾವೇರಿ'ಯಲ್ಲಿ ಶುಕ್ರವಾರ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಗೋಪೂಜೆ ಸಲ್ಲಿಸಿದರು

**ಅನುತ್ಪಾದಕ ಗೋವು ಸರ್ಕಾರ ಖರೀದಿಸಲಿ: ಸಿದ್ದು ಡಿಕೆಶಿ** ↘ 13

# ಗೋಹತ್ಯೆ ನಿಷೇಧಕ್ಕೆ ಸುಗ್ರೀವಾಜ್ಞೆ: ಮುಖ್ಯಮಂತ್ರಿ ಯಡಿಯೂರಪ್ಪ

↙ ಮೊದಲ ಪುಟದಿಂದ

ಸದನ ಮುಂದೂಡುವ ಅಧಿಕಾರವೂ ಅವರಿಗಿಲ್ಲ, ಹಾಗಾಗಿ ಮಂಗಳವಾರ ಮತ್ತೆ ಸದನ ನಡೆಸುವಂತೆ ಮನವಿ ಮಾಡಲಾಗಿದೆ ಎಂದರು. ಈ ಮೂಲಕ ಗೋಹತ್ಯೆ ನಿಷೇಧ ಮಸೂದೆ ಅಂಗೀಕಾರಕ್ಕೆ ಕೊನೆ ಪ್ರಯತ್ನ ನಡೆಸುವ ಪರೋಕ್ಷ ಸುಳಿವು ನೀಡಿದರು. 'ಶ್ರದ್ಧಾ ಭಕ್ತಿಯಿಂದ ಗೋ ಮಾತೆಗೆ ಪೂಜೆ ಸಲ್ಲಿಸಿದ್ದೇವೆ. ಹಿಂದೂ ಧರ್ಮದಲ್ಲಿ ಗೋವುಗಳನ್ನು ಪೂಜ್ಯ ಭಾವದಿಂದ ಕಾಣುವುದು ಜಗತ್ತಿಗೆ ಗೊತ್ತಿರುವ ಸಂಗತಿ. ಕೃಷಿ ಪ್ರಧಾನ ಭಾರತದಲ್ಲಿ ಪಶು ಸಂಗೋಪನೆ ಕೃಷಿಕರಿಗೆ ಆದಾಯ ನೀಡುವ ಉಪ ಕಸುಬಾಗಿದೆ. ಹೀಗಾಗಿ ನಮ್ಮ ರಾಜ್ಯದ ಗೋ ಸಂಪತ್ತಿನ ರಕ್ಷಣೆಗೆ ಸರ್ಕಾರ ಕಾನೂನು ಜಾರಿಗೊಳಿಸಿದೆ' ಎಂದು ಹೇಳಿದರು.